

ಸುಮಾರು 40,000 ಕೋಟಿ ರೂಪಾಯಿಗಳನ್ನು ಪ್ರಸಕ್ತ ಸಾಲಿನ ಆಯವ್ಯಯ ಪತ್ರದಲ್ಲಿ ರೈತರ ಏಳಿಗೆಗಾಗಿ ನೀಡಲಾಗಿದೆ.

ಎತ್ತಿನಹೊಳೆ ಯೋಜನೆಯಿಂದ ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಭಾಗ, ಬೆಂಗಳೂರು ಗ್ರಾಮೀಣ ಭಾಗದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಯಾಗಲಿದೆ. ಪಶ್ಚಿಮಾಭಿಮುಖವಾಗಿ ಹರಿಯುವ ನದಿಯ 24 ಟಿಎಂಸಿ ನೀರನ್ನು ಕೊಳವೆ ಮೂಲಕ ಹರಿಸಿ ನೀರು ತರುವ 13 ಸಾವಿರ ಕೋಟಿ ರೂ.ಗಳ ಬೃಹತ್ ಯೋಜನೆ ಇದು.

ವಿದ್ಯುತ್ ಕ್ಷೇತ್ರದಲ್ಲಿ ಸಾಕಷ್ಟು ಸುಧಾರಣೆಗಳನ್ನು ತರಲಾಗಿದೆ. ಹೆಚ್ಚುವರಿಯಾಗಿ ಸುಮಾರು 5800 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಜಲ ವಿದ್ಯುತ್, ಉಷ್ಣ ವಿದ್ಯುತ್, ಪವನ ವಿದ್ಯುತ್ ಮತ್ತು ಸೌರಶಕ್ತಿ ಎಲ್ಲವನ್ನೂ ಸೇರಿಸಿದರೆ ಸುಮಾರು 9000 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಆಗುತ್ತಿದೆ. ಇದರಿಂದಾಗಿ ರಾಜ್ಯದ ವಿದ್ಯುತ್ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧ್ಯವಾಗಿದೆ.

ಬೆಂಗಳೂರಿನಲ್ಲಿ ಟೆಂಡರ್ ಶ್ಯೂರ್ ರಸ್ತೆಗಳ ಯಶಸ್ಸಿನಿಂದ ಹುರುಪು ಪಡೆದಿರುವ ಸರಕಾರ ಇನ್ನೂ 25 ರಸ್ತೆಗಳನ್ನು ಟೆಂಡರ್ ಶ್ಯೂರ್ ರಸ್ತೆಗಳನ್ನಾಗಿ ಪರಿವರ್ತಿಸುವ ನಿರ್ಧಾರ ತೆಗೆದುಕೊಂಡಿದೆ. ಲೋಕೋಪಯೋಗಿ ಇಲಾಖೆಯಲ್ಲಿ 9500 ಕಿ.ಮೀ. ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿ ಮಾಡಲಾಗಿದೆ. ಎಲ್ಲ ಜಿಲ್ಲಾ ಮುಖ್ಯ ರಸ್ತೆಗಳು, ಹಳ್ಳಿ ರಸ್ತೆಗಳು ಸೇರಿದಂತೆ 46 ಸಾವಿರ ಕಿ.ಮೀ. ರಸ್ತೆ ಅಭಿವೃದ್ಧಿ ಪಡಿಸಲಾಗಿದೆ.

ಪೌರ ಕಾರ್ಮಿಕರ ಸೇವೆಯನ್ನು ಖಾಯಂ ಮಾಡುವ ನಿರ್ಧಾರ ಐತಿಹಾಸಿಕ. ಯಾವುದೇ ರಾಜ್ಯದಲ್ಲಿಯೂ ಇಂಥ ನಿರ್ಧಾರ ಕೈಗೊಳ್ಳಲಾಗಿಲ್ಲ. 11,500 ಪೌರ ಕಾರ್ಮಿಕರ ಸೇವೆ ಖಾಯಂಗೊಳ್ಳಲಿದೆ.



ಸರಕಾರ ಹೊರಗುತ್ತಿಗೆ ವ್ಯವಸ್ಥೆಯನ್ನೇ ರದ್ದು ಮಾಡಿ ಹಂತಹಂತವಾಗಿ ಅವರ ಸೇವೆಯನ್ನು ಖಾಯಂ ಮಾಡಲು ಉದ್ದೇಶಿಸಿದೆ. ಅಲ್ಲಿಯವರೆಗೆ ಹೊರಗುತ್ತಿಗೆ ಸಿಬ್ಬಂದಿಯ ಖಾತೆಗೆ ಸರಕಾರದಿಂದ ಅವರಿಗೆ ನ್ಯಾಯಯುತವಾಗಿ ದೊರೆಯಬೇಕಾದ ವೇತನ ಸಂದಾಯವಾಗಲಿದೆ.

ಮುಕ್ತ ಉದ್ಯೋಗ ಮಾರುಕಟ್ಟೆಯಲ್ಲಿ ಅಗತ್ಯವಿರುವ ಕೌಶಲ್ಯ ಯುವಕರಿಗೆ ದೊರೆಯಲು 5 ಲಕ್ಷ ಯುವಕರಿಗೆ ಪ್ರತಿ ವರ್ಷ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲಾಗುತ್ತಿದೆ.

ವಸತಿ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿಯನ್ನು ರಾಜ್ಯ ಸಾಧಿಸಿದೆ. ಐದು ವರ್ಷಗಳಲ್ಲಿ ಸೂರಿಲ್ಲದವರಿಗಾಗಿ 15 ಲಕ್ಷ ಮನೆಗಳನ್ನು ನಿರ್ಮಿಸುವ ಭರವಸೆಯನ್ನು ಸರಕಾರ ನೀಡಿತ್ತು. ನಾಲ್ಕು ವರ್ಷಗಳಲ್ಲಿ 11.75 ಲಕ್ಷ ಮನೆಗಳ ನಿರ್ಮಾಣವಾಗಿದೆ. ಈ ಆರ್ಥಿಕ ವರ್ಷದ ಕೊನೆಯೊಳಗೆ 16 ಲಕ್ಷ ಮನೆಗಳು ನಿರ್ಮಾಣವಾಗಲಿದೆ.

ಮಾತೃಪೂರ್ಣ ಎನ್ನುವ ಹೊಸ ಕಾರ್ಯಕ್ರಮವನ್ನು ಸರಕಾರ ರೂಪಿಸಿದೆ. ಗರ್ಭಿಣಿ ಸ್ತ್ರೀಯರಿಗೆ ಮತ್ತು ಬಾಣಂತಿಯರಿಗೆ ಪೌಷ್ಠಿಕ ಆಹಾರವನ್ನು ಒದಗಿಸುವುದು ಕಾರ್ಯಕ್ರಮದ ಉದ್ದೇಶ. ಮಾತೃಪೂರ್ಣ ಯೋಜನೆ ಅಕ್ಟೋಬರ್ 2ರಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಾರಿಗೆ ಬರಲಿದೆ. ಇದರಿಂದ ಪ್ರತಿನಿತ್ಯವೂ ಗರ್ಭಿಣಿ ಮತ್ತು ಬಾಣಂತಿಯರಿಗೆ ಸರಕಾರ ಉಚಿತವಾಗಿ ಮಧ್ಯಾಹ್ನದ ಬಿಸಿ ಊಟ ನೀಡಲಿದೆ. ಒಟ್ಟಾರೆಯಾಗಿ ಈ ಯೋಜನೆಯಿಂದ 12 ಲಕ್ಷ ಮಹಿಳೆಯರಿಗೆ ಪ್ರಯೋಜನವಾಗಲಿದೆ.

ಕ್ಷೀರಭಾಗ್ಯ ಯೋಜನೆಯಡಿ ಅಂಗನವಾಡಿ ಮತ್ತು ಒಂದರಿಂದ ಹತ್ತನೇ ತರಗತಿವರೆಗಿನ 1.08 ಕೋಟಿ ಮಕ್ಕಳಿಗೆ ಉಚಿತವಾಗಿ ಹಾಲನ್ನು ನೀಡಲಾಗುತ್ತಿದೆ. ಅಂಗನವಾಡಿಯ ಎಲ್ಲ ಮಕ್ಕಳಿಗೂ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ.

### ವಸತಿ ಭಾಗ್ಯ

ಪ್ರತಿವರ್ಷ ಮೂರು ಲಕ್ಷ ಮನೆಗಳಂತೆ ಐದು ವರ್ಷಗಳಲ್ಲಿ ಹದಿನೈದು ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹಾಕಿಕೊಂಡು, ಅದರಂತೆ ನಾಲ್ಕು ವರ್ಷಗಳಲ್ಲಿ 11.75 ಲಕ್ಷ ಮನೆಗಳನ್ನು ಪೂರ್ಣಗೊಳಿಸಲಾಗಿದೆ. 2017–18ನೇ ಸಾಲಿನಲ್ಲಿ ಇನ್ನುಳಿದ 3.25 ಲಕ್ಷ ಮನೆಗಳನ್ನು ಪೂರ್ಣಗೊಳಿಸುವುದರ ಜೊತೆಗೆ ಹೆಚ್ಚುವರಿಯಾಗಿ ಇನ್ನೂ ಒಂದು ಲಕ್ಷ ಮನೆಗಳನ್ನು ನಿರ್ಮಿಸಲಾಗುವುದು. ಒಟ್ಟಾರೆ ಐದು ವರ್ಷಗಳಲ್ಲಿ ಹದಿನಾರು ಲಕ್ಷ ಮನೆಗಳು ಪೂರ್ಣಗೊಳ್ಳಲಿವೆ. ಈ ಮೂಲಕ 75 ಲಕ್ಷ ಮಂದಿಗೆ ಶಾಶ್ವತ ಸೂರು ದೊರೆಯಲಿದೆ.

ಇಂದಿರಾ ಕ್ಯಾಂಟೀನ್ ಕೂಡಾ ಸರಕಾರದ ಜನಪರ ಕಾಳಜಿಗೆ ಸಾಕ್ಷಿ. ಬೆಂಗಳೂರು ನಗರದ 198 ವಾರ್ಡ್‌ಗಳಲ್ಲಿಯೂ ಕಡಿಮೆ ಬೆಲೆಯಲ್ಲಿ ಊಟ, ತಿಂಡಿಯನ್ನು ಒದಗಿಸುವುದು ಇಂದಿರಾ ಕ್ಯಾಂಟೀನ್ ಉದ್ದೇಶ. ಆಗಸ್ಟ್ 16ರಿಂದ 101 ಕ್ಯಾಂಟೀನ್‌ಗಳಲ್ಲಿ ಕಡಿಮೆ ಬೆಲೆಗೆ ಊಟ, ತಿಂಡಿ ನೀಡಲಾಗುತ್ತಿದೆ.

'ನಾವು ಘೋಷಣೆ ಮಾಡಿದ ಯೋಜನೆಗಳೆಲ್ಲವೂ ನಿರೀಕ್ಷಿಸಿದಂತೆ ಫಲ ನೀಡುತ್ತಿವೆ. ಇದರ ಫಲವಾಗಿ ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ಐದು ಕೋಟಿ ಜನರಿಗೆ ನೆರವಾಗಿದ್ದೇವೆ. ಜನರ ನಿರೀಕ್ಷೆಯಂತೆ ಸ್ವಚ್ಛ, ಪಾರದರ್ಶಕ ಹಾಗೂ ಭ್ರಷ್ಟಾಚಾರ ಮುಕ್ತ ಆಡಳಿತವನ್ನು ನೀಡಿದ್ದೇವೆ. ನಮ್ಮ ಜನಪರ ಯೋಜನೆಗಳ ಮೂಲಕವೇ ಜನಮನದಲ್ಲಿ ನೆಲೆಸಿದ್ದೇವೆ. ಈ ಅವಧಿಯಲ್ಲಿ ನಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ಸಹಕರಿಸಿದ ಸಚಿವ ಸಂಪುಟದ ಎಲ್ಲ ಸಹೋದ್ಯೋಗಿಗಳು, ಆತ್ಮೀಯರು, ಅಧಿಕಾರಿಗಳು ಸೇರಿದಂತೆ ರಾಜ್ಯದ ಜನತೆಗೆ ನಾನು ಅಭಾರಿಯಾಗಿದ್ದೇನೆ' ಎನ್ನುತ್ತಾರೆ ಮುಖ್ಯಮಂತ್ರಿ ಸಿದ್ದರಾಮಯ್ಯ.